# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –153 ಜಯನಗರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಜಯನಗರ ವಾರ್ಡ್–153 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:30/10/2021 ಶನಿವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ರವರು.
2. ಶ್ರೀ. ನವೀನ್‌ಕುಮಾರ್ ಕೆ. ಕಿರಿಯ ಅಭಿಯಂತರರು.
3. ಡಾ॥ ಹಲೀನ ವೈದ್ಯರು ವಾರ್ಡ್ 153–ಜಯನಗರ.
4. ಶ್ರೀ. ರವೀಂದ್ರ ಹಿಜೇರಿ ಹಿರಿಯ ಆರೋಗ್ಯ ಪರಿವೀಕ್ಷಕರು.
5. ಶ್ರೀ. ಮೂರ್ತಿ ಸಹಾಯಕ ಅಭಿಯಂತರರು ವಿದ್ಯುತ್ (ದಕ್ಷಿಣ).
6. ಶ್ರೀ. ಸ್ವಾಮಿಗೌಡ ತೋಟಗಾರಿಕೆ ಇಲಾಖೆ.
7. ಶ್ರೀ. ವಿಜಯ್‌ಕುಮಾರ್ ಕೆ.ಆರ್., ಕಿರಿಯ ಆರೋಗ್ಯ ಪರಿವೀಕ್ಷಕರು.
8. ಶ್ರೀ. ಮಲ್ಲಿಕಾರ್ಜುನ ಗೌಡ, ಜಲ ಪರಿವೀಕ್ಷಕರು.
9. ಪೊಲೀಸ್ ಸಬ್ ಇನ್ಸ್‌ಪೆಕ್ಟರ್, ಸಿದ್ದಾಪುರ ಪೊಲೀಸ್ ಠಾಣೆ.
10. ಶ್ರೀ. ಸಿ. ಜಗದೀಶ್ ವಾರ್ಡ್ 153ರ ಮಾರ್ಷಲ್.
11. ಶ್ರೀ. ಮಲ್ಲಪ್ಪ ಎಂ.ಕೆ. ಪೊಲೀಸ್ ಸಿಬ್ಬಂದಿ ಮೈಕೋಲೇಔಟ್ ಸಂಚಾರ ಪೊಲೀಸ್ ಠಾಣೆ.
12. ಶ್ರೀ. ಅನೀಸ್ ಅಹಮದ್, ಶ್ರೀ. ಲಕ್ಷ್ಮೀಶ್ & ಶ್ರೀ. ಸೋಮಶೇಖರ್ ಕೆ.ಸಿ. ಸಾರ್ವಜನಿಕರು.

*********

1. ವಾರ್ಡ್–153 ರ ಕುಂದು ಕೊರತೆಗಳ ಬಗ್ಗೆ ಚರ್ಚಿಸುವ ಸಂಬಂಧ ದಿನಾಂಕ:30/10/2021 ಶನಿವಾರದಂದು ಮಧ್ಯಾಹ್ನ 3.00 ಗಂಟೆಗೆ ನಿಗಧಿತ ಸಮಯಕ್ಕೆ ಸಭೆಯನ್ನು ಪ್ರಾರಂಭಿಸಲಾಯಿತು.



Scanned with CamScanner

2. ನೋಡಲ್ ಅಧಿಕಾರಿಯವರು ಮಾತನಾಡಿ ಹಾಲಿ ಮಳೆಗಾಲ ಪ್ರಾರಂಭವಾಗಿರುವುದರಿಂದ ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ ಮಲೇರಿಯಾ ಚಿಕುಂಗುನ್ಯ ಹೆಚ್ಚುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯ ಕೊಳಚೆ ಪ್ರದೇಶಗಳಲ್ಲಿ ಹಾಗೂ ವಸತಿ ಸಮುಚ್ಛಯಗಳು ಹಾಗೂ ವಸತಿ ಪ್ರದೇಶಗಳಲ್ಲಿ ಔಷದಿ ಸಿಂಪಡಿಸುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

ಕ್ರಮ : ಸ.ಕಾ.ನಿ.ಅ (ಘನತ್ಯಾಜ್ಯ ನಿರ್ವಹಣೆ)
ಆರೋಗ್ಯ ವೈದ್ಯಾಧಿಕಾರಿಗಳು (ಚಿಕ್ಕಪೇಟೆ)

3. ನೋಡಲ್ ಅಧಿಕಾರಿಯವರು ರವರು ಮಾತನಾಡಿ ಸಭೆಗೆ ಹಾಜರಾಗಿದ್ದ ಮಾರ್ಷಲ್ ರವರಿಗೆ ವಾರ್ಡ್ ವ್ಯಾಪ್ತಿಯಲ್ಲಿನ ವಾರ್ಡ್ ಇಂಜಿನಿಯರ್/ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರ ಗಮನಕ್ಕೆ ತಂದು ಎಲ್ಲರೂ ಒಗ್ಗಟ್ಟಾಗಿ ಸಾರ್ವಜನಿಕ ಸಮಸ್ಯೆಗಳನ್ನು ಬಗೆಹರಿಸಲು ತಿಳಿಸಿದರು. ಮುಂದುವರೆದಂತೆ ಬ್ಲಾಕ್ ಸ್ಪಾಟ್‌ಗಳನ್ನು ಪರಿವೀಕ್ಷಣೆ ಮಾಡಿ ಬ್ಲಾಕ್ ಸ್ಪಾಟ್‌ಗಳಲ್ಲಿ ಕಸ ಸುರಿಯುವವರ ವಿರುದ್ಧ ದಂಡ ವಿಧಿಸುವ ಸಂಬಂಧ ಕ್ರಮ ಕೈಗೊಳ್ಳಲು ಸಹ ತಿಳಿಸಿದರು. ಹಾಗೂ ವಾರ್ಡ್ ವ್ಯಾಪ್ತಿಯ ಕಸ ವಿಂಗಡಣೆ ಬಗ್ಗೆ ಹಾಗೂ ಪಾದಚಾರಿ ಮಾರ್ಗ ಒತ್ತುವರಿ ಕಾರ್ಯಾಚರಣೆಗಳನ್ನು ವಾರ್ಡ್ ಇಂಜಿನಿಯರ್/ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ಒಟ್ಟಾಗಿ ನಿರ್ವಹಿಸುವಂತೆ ತಿಳಿಸಿದರು.

ಕ್ರಮ : ವಾರ್ಡಿನ ಇಂಜಿನಿಯರ್, ಹಿರಿಯ/ಕಿರಿಯ
ಆರೋಗ್ಯ ಪರಿವೀಕ್ಷರು ಮತ್ತು ಮಾರ್ಷಲ್ ರವರು

4. ವಾರ್ಡಿನ ಸ್ಥಳೀಯರಾದ ಶ್ರೀ. ಅನೀಸ್ ಅಹಮದ್ ರವರು ಮಾತನಾಡಿ ಬಾಲ್ಡ್‌ವಿನ್ ಸ್ಕೂಲ್ ಬಳಿ BWSSB ರವರು ಈ ತಹಲ್‌ವರೆವಿಗೂ ಡೆಬ್ರಿಸ್ ತೆರವುಗೊಳಿಸಿರುವುದಿಲ್ಲವೆಂದು ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು BWSSB ಇಂಜಿನಿಯರ್ ರವರಿಗೆ ದೂರವಾಣಿ ಕರೆ ಮಾಡಿ ಕೂಡಲೇ ಡೆಬ್ರಿಸ್‌ನ್ನು ತೆರವುಗೊಳಿಸುವಂತೆ ಸೂಚಿಸಿದರು.

ಕ್ರಮ : BWSSB ಇಲಾಖೆ



Scanned with CamScanner

5. ವಾರ್ಡಿನ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಪಾಲಿಕೆಯ 9ನೇ ಮುಖ್ಯರಸ್ತೆ, 6ನೇ ಅಡ್ಡರಸ್ತೆಯ ಬಳಿ ನಿಲ್ಲಿಸಿದ್ದ ಪಾಲಿಕೆಯ ಕಾಂಪ್ಯಾಕ್ಟರ್ ವಾಹನದಿಂದ ಯಾರೋ ಕಿಡಿಗೇಡಿಗಳು ಡೀಸಲ್ ಕಳ್ಳತನ ಮಾಡಿರುವುದಾಗಿ ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಿದ್ದಾಪುರ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ರವರು ಮಾತನಾಡಿ ಕಳ್ಳತನ ಆಗಿರುವ ಬಗ್ಗೆ ದೂರು ನೀಡಿದ್ದಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

**ಕ್ರಮ : ಸಿದ್ಧಾಪುರ ಪೊಲೀಸ್ ಠಾಣೆ**

6. ವಾರ್ಡಿನ ಸ್ಥಳೀಯರಾದ ಶ್ರೀ. ಅನೀಸ್ ಅಹಮದ್ ರವರು ಮಾತನಾಡಿ ಚಿಕನ್ ಕೌಂಟಿ ಮುಂಭಾಗದಲ್ಲಿ ವಾಹನಗಳನ್ನು ತೆರವುಗೊಳಿಸದೇ ಇರುವ ಬಗ್ಗೆ ಸಭೆಗೆ ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಮೈಕೋ ಲೇಔಟ್ ಪೊಲೀಸ್ ಸಿಬ್ಬಂದಿ ರವರಿಗೆ ಈಗಾಗಲೇ ಹಲವಾರು ಬಾರಿ ವಾಹನಗಳನ್ನು ತೆರವುಗೊಳಿಸುವಂತೆ ಹಿಂದಿನ ಸಭೆಗಳಲ್ಲಿ ತಿಳಿಸಿದ್ದರೂ ಸಹ ಕ್ರಮ ಕೈಗೊಂಡಿರುವುದು ಕಂಡು ಬಂದಿರುವುದಿಲ್ಲ. ಆದ್ದರಿಂದ ಈ ಬಗ್ಗೆ ಪರಿಶೀಲಿಸಿ ಶೀಘ್ರವಾಗಿ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

**ಕ್ರಮ : ಮೈಕೋಲೇಔಟ್ ಸಂಚಾರಿ ಪೊಲೀಸ್ ಠಾಣೆ.**

7. ವಾರ್ಡ್ ಅಭಿಯಂತರರು ಮಾತನಾಡಿ ವಾರ್ಡ್ ಕಛೇರಿ ಆವರಣದಲ್ಲಿ ರಾತ್ರಿ ವೇಳೆಯಲ್ಲಿ ಯಾರೋ ಕಿಡಿಗೇಡಿಗಳು ಅನೈತಿಕ ಚಟುವಟಿಕೆಗಳನ್ನು ನಡೆಸುತ್ತಿರುವುದು ಕಂಡು ಬಂದಿದ್ದು, ಈ ಬಗ್ಗೆ ರಾತ್ರಿ ಗಸ್ತು ಪೊಲೀಸರನ್ನು ವಾರ್ಡ್ ಕಛೇರಿ ಆವರಣದಲ್ಲಿ ನಿಗಾ ವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ರವರಿಗೆ ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿರವರು ಸಹ ಮಾತನಾಡಿ ರಾತ್ರಿ ಪಾಳಿಯಲ್ಲಿ ಗಸ್ತು ಚುರುಕುಗೊಳಿಸಲು ಪೊಲೀಸರು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

**ಕ್ರಮ : ಸಿದ್ದಾಪುರ ಪೊಲೀಸ್ ಠಾಣೆ.**



Scanned with CamScanner

೮. ವಾರ್ಡಿನ ಸ್ಥಳೀಯರಾದ ಶ್ರೀ. ಸೋಮಶೇಖರ್ ರವರು ಮಾತನಾಡಿ 9ನೇ ಮುಖ್ಯರಸ್ತೆ, 2ನೇ ಬ್ಲಾಕ್ ಜಯನಗರ ರಲ್ಲಿ 990kv ಕೇಬಲ್ ಬಗ್ಗೆ ಒಂದು ತಿಂಗಳಲ್ಲಿ 51 ಬಾರಿ ವಿದ್ಯುತ್ ಕಟಾವುಗೊಳಿಸುತ್ತಿರುವುದಾಗಿ ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಬೆಸ್ಕಾಂ ಇಲಾಖೆ ರವರು ಕಳೆದ ಹಲವಾರು ಸಭೆಗೆ ಹಾಜರಾಗದೇ ಇರುವುದು ಕಂಡು ಬಂದಿದ್ದು, ಇದರಿಂದ ಸಾರ್ವಜನಿಕ ಕುಂದು ಕೊರತೆ ನಿವಾರಿಸಲು ಕಷ್ಟಸಾಧ್ಯವಾಗಿದ್ದು, ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಿರುವಂತೆ ಪತ್ರ ಬರೆಯಲು ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಹಾಗೂ ಮೇಲ್ಕಂಡ ಶ್ರೀ. ಸೋಮಶೇಖರ್ ರವರ ದೂರಿನ ಬಗ್ಗೆ ವಿವರಣೆಯನ್ನು ಸಹ ಮುಂದಿನ ಸಭೆಯಲ್ಲಿ ಹಾಜರುಪಡಿಸುವಂತೆ ತಿಳಿಸಿದರು.

ಕ್ರಮ : ಸ.ಕಾ.ನಿ.ಅ (ಹೊಂಬೇಗೌಡನಗರ)

ಮೇಲಿನ ಎಲ್ಲಾ ಅಂಶಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಹಾಜರಿದ್ದ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ತಿಳಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಗೈರುಹಾಜರಾಗಿರುವ ಇತರೆ ಇಲಾಖೆಯವರು ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ತಿಳಿಸುತ್ತಾ ಸಭೆ ಮುಕ್ತಾಯಗೊಳಿಸಲಾಯಿತು.

(ನವೀನ್‌ಕುಮಾರ್ ಕೆ.)
ಕಾರ್ಯದರ್ಶಿ
ವಾರ್ಡ್–153 ಜಯನಗರ

(ವರಲಕ್ಷ್ಮಮ್ಮ ಎಲ್) 6/11/21
ನೋಡಲ್ ಅಧಿಕಾರಿ
ವಾರ್ಡ್–153 ಜಯನಗರ



Scanned with CamScanner